ಅ) ರಾಜ್ಯದಲ್ಲಿರುವ ಪ್ರತಿ ತಾಲ್ಲೂಕುಗಳ ನೂರು ಬಾವಿ ಯೋಜನೆಯನ್ನು ಸರ್ಕಾರದವರು ಕೈಬಿಟ್ಟಿರುವರೆ?

ಆ) ಇದರಿಂದಾಗಿ ಗ್ರಾಮಾಂತರ ಪ್ರದೇಶದ ಜನರಿಗೆ ಅನಾನುಕೂಲ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು)

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಿಂದ ಅನುಮೋದಿಸಲ್ಪಟ್ಟಿದೆ) :

ಅ) ನೂರು ಬಾವಿ ಯೋಜನೆಯನ್ನು 1996-97ನೇ ಸಾಲಿನಿಂದ ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 12 ನೂಬಾಯೋ 96 ದಿನಾಂಕ 21-5-96ರ ಪ್ರಕಾರ ಮುಂದುವರೆಸಿರುವುದಿಲ್ಲ. ಅರ್ಜಿಗಳನ್ನು ಸಮಗ್ರ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮದಲ್ಲಿ ಪರಿಗಣಿಸಬೇಕೆಂದು ಜಿಲ್ಲಾ ಪಂಚಾಯತ್‌ಗಳಿಗೆ ಆದೇಶಿಸಲಾಗಿದೆ.

ಆ) ಬಂದಿರುವುದಿಲ್ಲ.

ಗ್ರಾಮ ಪಂಚಾಯತ್‌ಗಳಲ್ಲಿ ಖಾಲಿ ಇರುವ ಕಾರ್ಯದರ್ಶಿಗಳ ಹುದ್ದೆ

2652 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯತಿಗಳಿವೆ?

ಆ) ಈ ಗ್ರಾಮ ಪಂಚಾಯಿತಿಗಳಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಖಾಯಂ ಕಾರ್ಯದರ್ಶಿಗಳನ್ನು ನೇಮಿಸಲಾಗಿದೆ.

ಇ) ಈ ಖಾಯಂ ಕಾರ್ಯದರ್ಶಿಗಳಿಗೆ ಹೆಚ್ಚುವರಿ ಹುದ್ದೆ ನೀಡಲಾಗಿದೆಯೇ?

ಈ) ಖಾಲಿ ಇರುವ ಗ್ರಾಮ ಕಾರ್ಯದರ್ಶಿಗಳ ಸಂಖ್ಯೆ ಎಷ್ಟು, ಭರ್ತಿಮಾಡಲಾಗುವುದು?

ಉ) ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು.

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ) :

ಅ) 5657

ಆ) 5332

ಇ) ಅವಶ್ಯಕತೆ ಇರುವ ಕೆಲವೊಂದು ಕಡೆಗಳಲ್ಲಿ ಹೆಚ್ಚುವರಿ ಹುದ್ದೆ ನೀಡಲಾಗಿದೆ.

ಈ) ಖಾಲಿ ಇರುವ 325 ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ಹುದ್ದೆಗಳನ್ನು ನೇಮಕಾತಿ ನಿಯಮಗಳ ಪ್ರಕಾರ ಆದಷ್ಟು ಜಾಗ್ರತೆ ತುಂಬಲಾಗುವುದು.

ರಾಜ್ಯದ ತಾಲ್ಲೂಕು ಪಂಚಾಯತಿಗೆ ಮಂಜೂರಾಗಿರುವ ಲೆಕ್ಕ ಪರಿಶೋಧನಾಧಿಕಾರಿಯವರ ಹುದ್ದೆ.

2655 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ತಾಲ್ಲೂಕು ಪಂಚಾಯತಿಗೆ ಮಂಜೂರಾತಿಯಾದ ಲೆಕ್ಕ ಪರಿಶೋಧನಾಧಿಕಾರಿ (ಅಕೌಂಟ್ಸ್ ಆಫೀಸರ್) ಮತ್ತು ಯೋಜನಾಧಿಕಾರಿ (ಪ್ಲಾನಿಂಗ್ ಆಫೀಸರ್) ಗಳ ಹುದ್ದೆಗಳು ಎಷ್ಟು?

ಈ) ಮಂಜೂರಾತಿಯಾಗಿರುವ ಹುದ್ದೆಗಳಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಈ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ) :

ಅ) ತಾಲ್ಲೂಕು ಪಂಚಾಯತಿ ಹೆಚ್ಚುವರಿ ಸಿಬ್ಬಂದಿ ಮಂಜೂರು ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಆ) ಉದ್ಭವಿಸುವುದಿಲ್ಲ.

ಗ್ರಾಮಾಂತರ ಪ್ರದೇಶದಲ್ಲಿ ಎಸ್.ಎಸ್.ಎಲ್.ಸಿ.ವರೆಗೆ ವಿದ್ಯಾಭ್ಯಾಸ ಮಾಡಿದಂತಹವರಿಗೆ ಸಿಇಟಿ ಪರೀಕ್ಷೆ ರಿಯಾಯತಿ ನೀಡುವ ಕುರಿತು.

2538 - ಶ್ರೀ ಎಸ್. ಸುರೇಶ್‌ಕುಮಾರ್(ರಾಜಾಜಿನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮಾಂತರ ಪ್ರದೇಶದಲ್ಲಿಯೇ ಎಸ್.ಎಸ್.ಎಲ್.ಸಿ.ವರೆಗೆ ವಿದ್ಯಾಭ್ಯಾಸ ಮಾಡಿದಂತಹ ವಿದ್ಯಾರ್ಥಿಗಳಿಗೆ ಸಿ.ಇ.ಟಿ. ಪರೀಕ್ಷೆಯನ್ನು ತೆಗೆದುಕೊಳ್ಳಲು ಸರ್ಕಾರ ನೀಡಿರುವ ರಿಯಾಯ್ತಿಗಳು ಯಾವುವು.

ಆ) ನಗರ ಪ್ರದೇಶದ ವಿದ್ಯಾರ್ಥಿಗಳ ಮತ್ತು ಶಾಲೆಗಳ ಗುಣಮಟ್ಟಕ್ಕೆ ಹೋಲಿಸಿದಾಗ ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳು ಸ್ವಶಕ್ತಿಯಿಂದಲೇ ಅಂಕ ಗಳಿಸುತ್ತಿರುವುದನ್ನು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಇ) ಈ ತಾರತಮ್ಯವನ್ನು ನಿವಾರಿಸಲು ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳಿಗಾಗಿ ಪ್ರವೇಶ ಪರೀಕ್ಷೆಗೆ (ಸಿ.ಇ.ಟಿ) ನಿಗದಿಪಡಿಸಿರುವ ಶೇಕಡ 50 ಅಂಕಗಳನ್ನು ಶೇ. 40ಕ್ಕೆ ಇಳಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೆ.

ಈ) ಹಾಗಿಲ್ಲದಿದ್ದಲ್ಲಿ, ಇದಕ್ಕೆ ಪರ್ಯಾಯ ವ್ಯವಸ್ಥೆಯನ್ನು ರೂಪಿಸಲಾಗುವುದೇ?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :

ಅ) ಒಂದನೇ ತರಗತಿಯಿಂದ ಪಿ.ಯು.ಸಿ.ವರೆಗೆ ವಿದ್ಯಾಭ್ಯಾಸದಲ್ಲಿ ಕನಿಷ್ಠ 10 ವರ್ಷ ಗ್ರಾಮಾಂತರ ಪ್ರದೇಶದಲ್ಲಿ ಕಲಿತ ವಿದ್ಯಾರ್ಥಿಗಳಿಗೆ ಶೇಕಡಾ 15 ರಷ್ಟು ಸೀಟುಗಳನ್ನು ಕಾಯ್ದಿರಿಸಲಾಗಿದೆ.

ಆ) ಹೌದು.

ಇ) ಇಲ್ಲ.

ಈ) ಅವಶ್ಯಕತೆ ಇಲ್ಲ.

ಜಿಲ್ಲಾ ಪಂಚಾಯತಿ ಸದಸ್ಯರುಗಳಿಗೆ ತಾಲ್ಲೂಕು ಪಂಚಾಯತಿ ಸಭೆಗಳಿಗೆ ಆಹ್ವಾನಿಸದೇ ಇರುವುದು

1463 - ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಂಗಳೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಪಂಚಾಯತಿಯ ಸದಸ್ಯರುಗಳಿಗೆ ತಾಲ್ಲೂಕು ಪಂಚಾಯಿತಿಯ ಸಭೆಗಳಿಗೆ ಆಹ್ವಾನಿಸದೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?